# ಕರ್ನಾಟಕ ಸರ್ಕಾರದ ನಡವಳಿಗಳು

ವಿಷಯ:- ಉತ್ತರ ಕರ್ನಾಟಕದಲ್ಲಿ ಮೀನುಗಾರಿಕೆ ಅಭಿವೃದ್ಧಿಗಾಗಿ "ಒಳನಾಡು ಮೀನುಗಾರಿಕೆ ಅಭಿವೃದ್ಧಿ ಕೇಂದ್ರ" ಸ್ಥಾಪನೆಗೆ ಆಡಳಿತಾತ್ಮಕ ಮಂಜೂರಾತಿ ನೀಡುವ ಕುರಿತು.

ಓದಲಾಗಿದೆ:- ಪತ್ರ ಸಂಖ್ಯೆ: ಮೀನಿ/37/ಪಂವಾಯೋ(1)/2016, ದಿನಾಂಕ: 07-05-2016, 04-06-206 ಮತ್ತು 06-07-2016.

G-6320

******

**ಪ್ರಸ್ತಾವನೆ:**

ರಾಜ್ಯ ಸರ್ಕಾರವು 2016-17 ನೇ ಸಾಲಿನ ಆಯವ್ಯಯ ಭಾಷಣದ ಕಂಡಿಕೆ-59 ರಲ್ಲಿ ಉತ್ತರ ಕರ್ನಾಟಕದಲ್ಲಿ ಮೀನುಗಾರಿಕೆ ಅಭಿವೃದ್ಧಿಗಾಗಿ "ಒಳನಾಡು ಮೀನುಗಾರಿಕೆ ಅಭಿವೃದ್ಧಿ ಕೇಂದ್ರ"ವನ್ನು ಸ್ಥಾಪಿಸಲು ಉದ್ದೇಶಿಸಲಾಗಿದೆಯೆಂದು ಘೋಷಿಸಲಾಗಿದೆ.

ಮೇಲೆ ಓದಲಾದ ಮೀನುಗಾರಿಕೆ ನಿರ್ದೇಶಕರ ಪತ್ರಗಳಲ್ಲಿ, ಉತ್ತರ ಕರ್ನಾಟಕದಲ್ಲಿ ಉತ್ತಮವಾದ ಜಲಸಂಪನ್ಮೂಲ ಅಸ್ತಿತ್ವದಲ್ಲಿ ಇದ್ದರೂ ಸಹ, ಮಳೆಗಾಲದ ಏರಿಳಿತದಿಂದಾಗಿ ಕೆರೆಗಳಲ್ಲಿ ನೀರು ಲಭ್ಯವಾಗುವ ಅವಧಿ ವ್ಯತ್ಯಯವಾಗುತ್ತಿದೆ. ಸೂಕ್ತ ಸಮಯದಲ್ಲಿ ಉತ್ತಮ ಗುಣಮಟ್ಟದಲ್ಲಿ ಈ ಪ್ರದೇಶದ ಮೀನುಮರಿ ಬೇಡಿಕೆಯನ್ನು ಪೂರ್ಣವಾಗಿ ಪೂರೈಸಲು ಸಾಧ್ಯವಾಗುತ್ತಿಲ್ಲ. ಮೀನು ಕೃಷಿಗೆ ಅಗತ್ಯವಾದ ಮೀನಿನ ಆಹಾರ, ಬಲೆ ಇತ್ಯಾದಿಗಳನ್ನು ಮತ್ತು ಮೀನು ಹಿಡುವಳಿಯಾದ ನಂತರ ಉತ್ತಮ ಮಾರುಕಟ್ಟೆ ವ್ಯವಸ್ಥೆಯನ್ನು ಒದಗಿಸಬೇಕಾಗುತ್ತದೆ. ಈ ಹಿನ್ನೆಲೆಯಲ್ಲಿ, ಉತ್ತರ ಕರ್ನಾಟಕದ ಜಿಲ್ಲೆಗಳ ಮೀನುಗಾರರ ಸಾಮಾಜಿಕ ಹಾಗೂ ಆರ್ಥಿಕ ಅಭಿವೃದ್ಧಿಗಾಗಿ ಮೀನುಗಾರಿಕೆಯಲ್ಲಿ ಆಧುನಿಕ ತಂತ್ರಜ್ಞಾನಗಳ ಬಳಕೆ, ಹೊಸ ವಿಧಾನ, ವಿವಿಧ ತಳಿಗಳ ಕುರಿತು ಮಾಹಿತಿ ನೀಡುವುದು ಹಾಗೂ ಸಂಶೋಧನೆ, ವಿಸ್ತರಣೆ ಮತ್ತು ಅಭಿವೃದ್ಧಿ ಕೈಗೊಳ್ಳುವ ದೃಷ್ಟಿಯಿಂದ ಇಲಾಖೆಯ ಅಧಿಕಾರಿಗಳನ್ನೊಳಗೊಂಡ **"ಉತ್ತರ** ಕರ್ನಾಟಕ ಒಳನಾಡು ಮೀನುಗಾರಿಕೆ ಅಭಿವೃದ್ಧಿ ಸಂಸ್ಥೆ" ಎಂಬ ಸಂಸ್ಥೆಯನ್ನು ಸೃಷ್ಟಿಸಲು ಯೋಜಿಸಲಾಗಿದ್ದು, ಉದ್ದೇಶಿತ ಸಂಸ್ಥೆಯನ್ನು ಕರ್ನಾಟಕ ಸಂಘಗಳ ನೋಂದಣಿ ಕಾಯಿದೆ 1960 (Karnataka Societies Registration Act-1960) ಅಡಿಯಲ್ಲಿ ನೋಂದಣಿ ಮಾಡಲಾಗುವುದೆಂದು ತಿಳಿಸುತ್ತಾ, ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು ಉದ್ದೇಶಿತ ಸಂಸ್ಥೆಯ ಆಡಳಿತ ಮಂಡಳಿಯ ಅಧ್ಯಕ್ಷರಾಗಿರುವುದಾಗಿ ತಿಳಿಸುತ್ತಾ, ಉದ್ದೇಶಿತ ಸಂಸ್ಥೆಯ

-2-

ಕಾರ್ಯಚಟುವಟಿಕೆಗಳು ಮೀನುಗಾರಿಕೆ ಇಲಾಖೆಯ ಚಟುವಟಿಕೆಗಳಿಗೆ ಪೂರಕವಾಗಿದ್ದು, ಮೇಲೆ ವ್ಯಾಪಿಸಿದಂತೆ ಆಗುವುದಿಲ್ಲ. ಉದ್ದೇಶಿತ ಸಂಸ್ಥೆಯ ಕೇಂದ್ರ ಕಛೇರಿಯನ್ನು ಬಿಜಾಪುರ ಜಿಲ್ಲೆ, ಆಲಮಟ್ಟಿಯಲ್ಲಿ ಅಥವಾ ಸೂಕ್ತ ಸ್ಥಳದಲ್ಲಿ ಸ್ಥಾಪಿಸಲಾಗುವುದು. ಆದ್ದರಿಂದ, ಸದರಿ ಯೋಜನೆಯನ್ನು ಅನುಷ್ಠಾನಗೊಳಿಸಲು ಆಡಳಿತಾತ್ಮಕ ಮಂಜೂರಾತಿ ನೀಡುವಂತೆ ಕೋರಿರುತ್ತಾರೆ.

ಮೀನುಗಾರಿಕೆ ನಿರ್ದೇಶಕರ ಪ್ರಸ್ತಾವನೆಯನ್ನು ಕೂಲಂಕಷವಾಗಿ ಪರಿಶೀಲಿಸಿದ ಸರ್ಕಾರವು, ಕೆಳಕಂಡಂತೆ ಆದೇಶಿಸಿದೆ.

**ಆದೇಶ ಸಂಖ್ಯೆ: ಪಸಂಮೀ 80 ಮೀಇಯೋ 2016, ಬೆಂಗಳೂರು ದಿನಾಂಕ: 17-09-2016**

ಪ್ರಸ್ತಾವನೆಯಲ್ಲಿ ವಿವರಿಸಿರುವ ಅಂಶಗಳ ಹಿನ್ನೆಲೆಯಲ್ಲಿ, 2016-17ನೇ ಸಾಲಿನ ಆಯವ್ಯಯ ಭಾಷಣದಲ್ಲಿ ಘೋಷಿಸಿದ **"ಉತ್ತರ ಕರ್ನಾಟಕದಲ್ಲಿ ಮೀನುಗಾರಿಕೆ** ಅಭಿವೃದ್ಧಿಗೆ ಸ್ಥಳೀಯ ನಿರ್ದಿಷ್ಟ ಕಾರ್ಯಕ್ರಮಗಳನ್ನು ರೂಪಿಸಿ ಅನುಷ್ಠಾನಗೊಳಿಸಲು, ಅಗತ್ಯ ಯೋಜನಾ ವರದಿಯ ತಯಾರಿಕೆ ಮತ್ತು ಮೀನುಗಾರಿಕೆ ಶಿಕ್ಷಣ, ಸಂಶೋಧನೆ, ವಿಸ್ತರಣೆ ಮತ್ತು ಅಭಿವೃದ್ಧಿ ಕೈಗೊಳ್ಳುವ ಉದ್ದೇಶದೊಂದಿಗೆ 2 ಕೋಟಿ ರೂ.ಗಳ ಆಯವ್ಯಯ ಹಂಚಿಕೆಯೊಡನೆ "ಒಳನಾಡು ಮೀನುಗಾರಿಕೆ ಅಭಿವೃದ್ಧಿ ಕೇಂದ್ರವನ್ನು ಸ್ಥಾಪಿಸಲು ಉದ್ದೇಶಿಸಿದೆ" ಎಂಬ ಹೊಸ ಕಾರ್ಯಕ್ರಮವನ್ನು 2016-17ನೇ ಸಾಲಿಗೆ ಯೋಜನಾ ಲೆಕ್ಕ ಶೀರ್ಷಿಕೆ "2405-00-101-0-67" ಅಡಿ ಒದಗಿಸಿರುವ ರೂ.200.00 ಲಕ್ಷ (ಎರಡುನೂರು ಲಕ್ಷ ರೂಪಾಯಿಗಳು ಮಾತ್ರ)ಗಳ ಅನುದಾನದಿಂದ ಅನುಷ್ಠಾನಗೊಳಿಸಲು **ಆಡಳಿತಾತ್ಮಕ ಅನುಮೋದನೆ** ನೀಡಿದೆ.

ಈ ಆದೇಶವನ್ನು ಯೋಜನಾ ಇಲಾಖೆಯ ಟಿಪ್ಪಣಿ ಸಂಖ್ಯೆ: ಪಿಡಿ/26/ಪಿಎಫ್‌ಒ/2016, ದಿನಾಂಕ: 11-08-2016 ಮತ್ತು ಆರ್ಥಿಕ ಇಲಾಖೆ ಟಿಪ್ಪಣಿ ಸಂಖ್ಯೆ: ಆಇ/463/ವೆಚ್ಚ-4/2016, ದಿನಾಂಕ: 06-09-2016 ರಲ್ಲಿ ನೀಡಿರುವ ಸಹಮತಿ ಮೇರೆಗೆ ಹೊರಡಿಸಲಾಗಿದೆ.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ,

17/9/16

(ರಶ್ಮಿ ಶಿವಶಂಕರ ಪೋಳ)
ಸರ್ಕಾರದ ಅಧೀನ ಕಾರ್ಯದರ್ಶಿ
ಪಶುಸಂಗೋಪನೆ ಮತ್ತು ಮೀನುಗಾರಿಕೆ ಇಲಾಖೆ
(ಮೀನುಗಾರಿಕೆ)

17/9/16

**ಇವರಿಗೆ:**

1) ಪ್ರಧಾನ ಮಹಾಲೇಖಪಾಲರು (ಜಿ&ಎಸ್‌ಎಸ್‌ಎ)(ಇ&ಆರ್‌ಎಸ್‌ಎ), ಕರ್ನಾಟಕ, ಹೊಸ ಕಟ್ಟಡ, "ಆಡಿಟ್ ಭವನ", ಬೆಂಗಳೂರು.

2) ಪ್ರಧಾನ ಮಹಾಲೇಖಪಾಲರು (ಎ&ಇ), ಕರ್ನಾಟಕ, ಪಾರ್ಕ್‌ಹೌಸ್ ರಸ್ತೆ, ಬೆಂಗಳೂರು.
3) ಮೀನುಗಾರಿಕೆ ನಿರ್ದೇಶಕರು, ಬೆಂಗಳೂರು.
4) ನಿರ್ದೇಶಕರು (ಪಿಎಫ್‌ಡಿ), ಯೋಜನೆ, ಕಾರ್ಯಕ್ರಮ ಸಂಯೋಜನೆ ಮತ್ತು ಸಾಂಖ್ಯಿಕ ಇಲಾಖೆ, ಬಹುಮಹಡಿಗಳ ಕಟ್ಟಡ, ಬೆಂಗಳೂರು.
5) ಜಂಟಿ ನಿರ್ದೇಶಕರು, ಗಣಕ ಜಾಲ ನಿರ್ವಹಣಾ ಕೇಂದ್ರ, ಖನಿಜ ಭವನ, ರೇಸ್‌ಕೋರ್ಸ್ ರಸ್ತೆ, ಬೆಂಗಳೂರು.
6) ಸಂಬಂಧಪಟ್ಟ ಮೀನುಗಾರಿಕೆ ಉಪ ನಿರ್ದೇಶಕರುಗಳಿಗೆ – ಮೀನುಗಾರಿಕೆ ನಿರ್ದೇಶಕರ ಮುಖಾಂತರ.
7) ಆಂತರಿಕ ಆರ್ಥಿಕ ಸಲಹೆಗಾರರು, ಕೃ.ತೋ. ಮತ್ತು ಪ.ಸಂ.ಮೀ. ಇಲಾಖೆ.
8) ಸರ್ಕಾರದ ಅಧೀನ ಕಾರ್ಯದರ್ಶಿ, ಆರ್ಥಿಕ ಇಲಾಖೆ (ವೆಚ್ಚ-4), ವಿಧಾನಸೌಧ, ಬೆಂಗಳೂರು.
9) ಖಜಾನಾಧಿಕಾರಿ, ರಾಜ್ಯ ಹುಜೂರ್ ಖಜಾನೆ, ಬೆಂಗಳೂರು.
10) ಶಾಖಾ ರಕ್ಷಾ ಕಡತ / ಸಮನ್ವಯ-ಕಂಪೆಂಡಿಯಮ್ / ಹೆಚ್ಚುವರಿ ಪ್ರತಿಗಳು.